# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 615 |
| ಸದಸ್ಯರ ಹೆಸರು | : | ಶ್ರೀ ಆರ್.ಬಿ.ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 11-03-2020 |
| ಉತ್ತರಿಸುವ ಸಚಿವರು | : | ಮಾನ್ಯ ಕಂದಾಯ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| (ಅ) | ಬಾಗಲಕೋಟೆ ಜಿಲ್ಲೆಯಲ್ಲಿ ಘಟಪ್ರಭಾ ನದಿಯ ಪ್ರವಾಹದಿಂದಾಗಿ ಹಾನಿಗೊಳಗಾದ ಕಬ್ಬು ಇಳುವರಿ ಪ್ರದೇಶದ ವಿಸ್ತೀರ್ಣವೆಷ್ಟು; ಈ ಪ್ರದೇಶದಲ್ಲಿ ಬೆಳೆಯಬಹುದಾದ ಕಬ್ಬಿನ ಒಟ್ಟು ಪ್ರಮಾಣವೆಷ್ಟು; | ಘಟಪ್ರಭಾ ನದಿಯು ಬಾಗಲಕೋಟೆ ಜಿಲ್ಲೆಯ ಮುಧೋಳ, ಬೀಳಗಿ ಮತ್ತು ಬಾಗಲಕೋಟೆ ತಾಲ್ಲೂಕುಗಳಲ್ಲಿ ಹರಿಯುತ್ತದೆ.<br><br>ಕಾರಣ ಮುಧೋಳ-13469 ಹೆಕ್ಟೇರ್, ಬೀಳಗಿ-1772 ಹೆಕ್ಟೇರ್ ಮತ್ತು ಬಾಗಲಕೋಟೆ ತಾಲ್ಲೂಕಿನಲ್ಲಿ 1550 ಹೆಕ್ಟೇರ್ ಪ್ರದೇಶದಲ್ಲಿ ಹೀಗೆ ಒಟ್ಟು 16791 ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಬೆಳೆ ಘಟಪ್ರಭಾ ನದಿಯ ಪ್ರವಾಹದಿಂದ ಹಾನಿಗೊಳಗಾಗಿರುತ್ತದೆ.<br><br>ಪ್ರತಿ ಹೆಕ್ಟೇರ್ ಅಂದಾಜು 100 ಟನ್ ಕಬ್ಬು ಬೆಳೆಯಬಹುದಾಗಿದೆ. |
| (ಆ) | ಪ್ರವಾಹದಿಂದ ನಷ್ಟಗೊಂಡ ಕಬ್ಬು ಬೆಳೆಗಾರರಿಗೆ ಸರ್ಕಾರ ನೀಡಿರುವ ಪರಿಹಾರದ ಮೊತ್ತವೆಷ್ಟು; ಈ ಪರಿಹಾರ ಮೊತ್ತವು ಸಂಬಂಧಿಸಿದ ಕಬ್ಬು ಬೆಳೆಗಾರರಿಗೆ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಪ್ರವಾಹದಿಂದ ಹಾನಿಯಾದ ನೀರಾವರಿ ಬೆಳೆ ಹಾನಿಗೆ ಪ್ರತಿ ಹೆಕ್ಟೇರ್ ಗೆ ಮಾರ್ಗಸೂಚಿಯಂತೆ ರೂ 13500/- ಹಾಗೂ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ 10000/- ಸೇರಿ ಒಟ್ಟು ರೂ 23500/- ದರದಲ್ಲಿ ಗರಿಷ್ಠ 2 ಹೆಕ್ಟೇರ್‌ಗೆ ಸೀಮಿತಗೊಳಿಸಿ ಇನ್ ಪುಟ್ ಸಬ್ಸಿಡಿ ಪಾವತಿಸಲಾಗುತ್ತಿದೆ.<br><br>ಪ್ರಸ್ತುತ ಮೇಲಿನ 3 ತಾಲ್ಲೂಕುಗಳಲ್ಲಿ 8778 ರೈತರಿಗೆ ರೂ 2222.75 ಲಕ್ಷ ಇನ್ ಪುಟ್ ಸಬ್ಸಿಡಿ ಮೊತ್ತವನ್ನು ಪರಿಹಾರ ತಂತ್ರಾಂಶದ ಮೂಲಕ ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗಿದೆ. |
| (ಇ) | ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು? | ಉದ್ಭವಿಸುವುದಿಲ್ಲ |

ಕಂಇ 123 ಟಿಎನ್‌ಆರ್ 2020

(ಆರ್ ಅಶೋಕ)
ಕಂದಾಯ ಸಚಿವರು